**ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ, ಬಾಗೇಪಲ್ಲಿ**

ಸಿ.ಸಿ. 95/2022

| | | | |
|---|---|---|---|
| ಸಾಕ್ಷಿದಾರರ ಹೆಸರು | ಃ | ಶ್ರೀನಿವಾಸ | ಸಿಡಬ್ಲೂಃ**1** |
| ತಂದೆ ಹೆಸರು ಃ | | ಸಂಜೀವಪ್ಪ | ಪಿಡಬ್ಲೂಃ **1** |
| ವಯಸ್ಸು | ಃ | 49 ವರ್ಷ | ಪ್ರಮಾಣೀಕರಿಸಲಾದ ದಿನಾಂಕ |
| ವೃತ್ತಿ | ಃ | ಕೂಲಿ | 01.07.2026. |
| ವಾಸ ಸ್ಥಳ | ಃ | ಚಾಕವೇಲು ಗ್ರಾಮ | |

**ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ**

ಚಾಸಾ.**2** ನನ್ನ ಹೆಂಡತಿ. ಚಾಸಾ- **2** ರಿಂದ **7** ರವರು ಗೊತ್ತು, ಈಗ ನ್ಯಾಯಾಲಯದ ಮುಂದಿರುವ **1** ಮತ್ತು **5** ನೇ ಆರೋಪಿಗಳು ಗೊತ್ತು. **2** ರಿಂದ **4** ನೇ ಆರೋಪಿಗಳು ಗೈರು ಹಾಜರಿದ್ದು ಅವರ ಗುರುತಿಸುವಿಕೆಯಲ್ಲಿ ಆರೋಪಿ ಪರ ವಕೀಲರು ಯಾವುದೇ ತಕರಾರು ಸಲ್ಲಿಸಿರುವುದಿಲ್ಲ.

ಆರೋಪಿಗಳು ಅಕ್ರಮ ಗುಂಪು ಕಟ್ಟಿಕೊಂಡು ಬಂದು ನನಗೆ ಯಾವತ್ತೂ ಕಬ್ಬಿಣದ ರಾಡಿನಿಂದಾಗಲೀ ಅಥವಾ ದೊಣ್ಣೆಯಿಂದ ಮತ್ತು ಕಲ್ಲಿನಿಂದ ಆಗಲೀ ಹೊಡೆದು ಹಲ್ಲೆ ಮಾಡಿರುವುದಿಲ್ಲ ಮತ್ತು ಅವಾಚ್ಯ ಶಬ್ಧಗಳಿಂದ ಬೈದಿರುವುದಿಲ್ಲ ಮತ್ತು ಪ್ರಾಣ ಬೆದರಿಕೆ ಹಾಕಿರುವುದಿಲ್ಲ.

ಈಗ್ಗೆ ಸುಮಾರು **5** ವರ್ಷಗಳ ಹಿಂದೆ ನಾನು ಅನಾರೋಗ್ಯದ ಕಾರಣ ಆಸ್ಪತ್ರೆಗೆ ಹೋಗಿದ್ದಾಗ ಅಲ್ಲಿ ಪೋಲೀಸರು ನನ್ನಿಂದ ಕೆಲವೊಂದು ದಾಖಲೆಗಳಿಗೆ ಸಹಿ ಪಡೆದುಕೊಂಡಿರುತ್ತಾರೆ. ಸಾಕ್ಷಿಯು ದೂರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.**1** ಎಂದು, ಸಾಕ್ಷಿಯ ಸಹಿಯನ್ನು ನಿಪಿ.**1**(ಎ) ಎಂದು ಗುರುತಿಸಲಾಯಿತು. ನಾನು ಪೋಲೀಸರಿಗೆ ನನ್ನನ್ನು ಯಾವುದೇ ಮರು ಹೇಳಿಕೆ ನೀಡಿರುವುದಿಲ್ಲ.

**(ಮಾನ್ಯ ಸ.ಸಅ.ರವರು ಸಾಕ್ಷಿಯನ್ನು ಪ್ರತಿಕೂಲವೆಂದು ಪರಿಗಣಿಸಿದ್ದು ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಸ.ಸ.ಅ ರವರಿಂದಃ</u>**

ದಿನಾಂಕ 07.09.2021 ರಂದು ಬೆಳಗ್ಗೆ 10.00 ಗಂಟೆ ಸಮಯದಲ್ಲಿ ನಾನು ಅಂಗಡಿಗೆ ಹೋಗುತ್ತಿದ್ದಾಗ, 1 ನೇ ಆರೋಪಿಯು ರಾಜುರವರ ಮನೆಯ ಬಳಿ ನಿಂತುಕೊಂಡಿದ್ದಾಗ, ಚೀಟಿ ಹಣ ಕೊಡುವಂತೆ ಕೇಳಿದಾಗ, 1 ನೇ ಆರೋಪಿಯು ಲೋಫರ್ ನನ್ನ ಮಗನೆ ಎಂದು ಬೈದಿರುತ್ತಾರೆ ಎಂದರೆ ಸರಿಯಲ್ಲ ಮತ್ತು ನಿನಗೆ ಯಾವುದೇ ಹಣ ಕೊಡಬೇಕಾಗಿಲ್ಲ. ನಿನ್ನನ್ನು ಇಲ್ಲಿಯೇ ಸಾಯಿಸಿಬಿಡುತ್ತೇನೆ ಎಂದು ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಅಲ್ಲೆ ಕಬ್ಬಿಣದ ರಾಡಿನಿಂದ 1 ನೇ ಆರೋಪಿಯು ನನ್ನ ಎಡ ಭಾಗದ ಕಿವಿಯ ಮೇಲೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. 2 ನೇ ಆರೋಪಿಯು ನನ್ನ ಬಲಗಾಲಿಗೆ ಹೊಡೆದಿರುತ್ತಾರೆ ಎಂದರೆ ಸರಯಲ್ಲ. 3 ನೇಆರೋಪಿಯು ನನ್ನ ತಲೆಯ ಮೇಲೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. 4 ನೇ ಆರೋಪಿಯು ನನ್ನ ಗಲ್ಲಪಟ್ಟಿಯನ್ನು ಹಿಡಿದು ಎಳೆದಾಡಿರುತ್ತಾರೆ ಎಂದರೆ ಸರಿಯಲ್ಲ. 5 ನೇ ಆರೋಪಿಯು ನನ್ನನ್ನು ಕುರಿತು ಬೇವರ್ಸಿ ನನ್ನ ಮಗನೆ ಎಂದು ಬೈದಿರುತ್ತಾರೆ ಎಂದರೆ ಸರಿಯಲ್ಲ. ಈ ಹಲ್ಲೆಯಿಂದಾದ ಆದ ಗಾಯಗಳಿಗೆ ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ನಿಪಿ-1 ರಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿನಾಂಕ 28.12.2021 ರಂದು ನನ್ನ ಮರು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಮರು ಹೇಳಿಕೆಯನ್ನು ಅಲ್ಲಗಳೆದಿರುವ ಕಾರಣ ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ಈಗ ನನಗೆ ತೋರಿಸುತ್ತಿರುವ ಕಬ್ಬಿಣದ ರಾಡ್, ದೊಣ್ಣೆ , ಕಲ್ಲಿನಿಂದಲೇ ಆರೋಪಿತರು ನನಗೆ ಹಲ್ಲೆ ಮಾಡಿರುತ್ತಾರೆ ಎಂದರೆ ಸರಿಯಲ್ಲ.

ನಾನು ಮತ್ತು ಆರೋಪಿತರು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ. ಹಾಗಾಗಿ ಈಗ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿ ಅಲ್ಲ.

**<u>ಪಾಟೀ ಸವಾಲು ಇಲ್ಲ.</u>**

**<u>ಮರು ವಿಚಾರಣೆ ಇಲ್ಲಃ</u>**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)**

ಓ. ಹೇ. ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಬಾಗೇಪಲ್ಲಿ .